## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2008-09 ಸಾಲಿನಲ್ಲಿ ರಾಜ್ಯ ವಲಯದ MNPಯಡಿ ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕಾಗಿ 1ನೇ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 26 ಗ್ರಾನೀಸ (2) 08 ದಿ:17.4.2008.

**ಪೀಠಿಕೆ:**

ಮೇಲೆ ಓದಲಾದ ಸರ್ಕಾರಿ ಆದೇಶದಲ್ಲಿ 2008-09ರ ಸಾಲಿಗೆ ರಾಜ್ಯ ಮತ್ತು ಕೇಂದ್ರ ವಲಯಗಳಡಿ ಕುಡಿಯುವ ನೀರು ಮತ್ತು ನೈರ್ಮಲ್ಯ ಬಾಬ್ತಿಗೆ ಸಂಬಂಧಿಸಿದ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಪ್ರಸಕ್ತ ಸಾಲಿಗೆ ರಾಜ್ಯ ವಲಯದ MNPಯಡಿ ಲೆಕ್ಕ **ಶೀರ್ಷಿಕೆ 4215-01-102-9-01-132**ರಡಿ ರೂ.20000.00 ಲಕ್ಷಗಳನ್ನು ಗ್ರಾಮೀಣ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನ ಸಲುವಾಗಿ ಆಯವ್ಯಯದಲ್ಲಿ ಒದಗಿಸಲಾಗಿದೆ. ಈ ಪೈಕಿ 1ನೇ ಕಂತಾಗಿ **ರೂ.4000.00** ಲಕ್ಷಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ಬಿಡುಗಡೆ ಮಾಡಬಹುದಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 31 ಗ್ರಾನೀಸ (2) 08, ಬೆಂಗಳೂರು, ದಿನಾಂಕ:28.05.2008**

2008-09ರ ಸಾಲಿಗೆ ರಾಜ್ಯ ವಲಯದ MNPಯಡಿ ಗ್ರಾಮೀಣ ನೀರು ಸರಬರಾಜು ಕಾರ್ಯಕ್ರಮಗಳ ಅನುಷ್ಠಾನ ಸಂಬಂಧ ಮೊದಲನೆ ಕಂತು **ರೂ.4000.00** ಲಕ್ಷಗಳನ್ನು (ನಾಲ್ಕು ಸಾವಿರ ಲಕ್ಷ ರೂಪಾಯಿಗಳು ಮಾತ್ರ) ಈ ಆದೇಶಕ್ಕೆ ಲಗತ್ತಿಸಿರುವ **ಅನುಬಂಧ-1ರಲ್ಲಿ** ಹೇಳಿರುವಂತೆ ಸಂಬಂಧಪಟ್ಟ ಜಿಲ್ಲಾ ಪಂಚಾಯತ್‌ಗಳಿಗೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿಗಳು ಈ ಆದೇಶದಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ/7/ಜೆಡ್‌ಪಿಎ/03 ದಿನಾಂಕ:14.7.2005ರನ್ವಯ ಖಜಾನೆಯಿಂದ ಪಡೆದು ಉದ್ದೇಶಿತ ಯೋಜನೆಗಳ ಅನುಷ್ಠಾನ ಸಲುವಾಗಿ ಆಯಾ ಯೋಜನಾ ಮಾರ್ಗದರ್ಶಿಗಳನ್ವಯ ವೆಚ್ಚ ಭರಿಸತಕ್ಕದ್ದು.

3. ಈ ಅನುದಾನವನ್ನು 2007-08ರಡಿ ಅನುಮೋದಿಸಿರುವ ಕ್ರಿಯಾ ಯೋಜನೆಯ ಮುಂದುವರಿದ ಹಾಗೂ ಪೂರ್ಣಗೊಂಡಿರುವ ಕಾಮಗಾರಿಗಳಿಗೆ ಮಾತ್ರ ಬಳಸತಕ್ಕದ್ದು ಯಾವುದೇ ಹೊಸ ಕ್ರಿಯಾ ಯೋಜನೆಗಾಗಿ ಬಳಸತಕ್ಕದ್ದಲ್ಲ. ಮುಂದುವರಿದ ಕಾಮಗಾರಿಗಳಲ್ಲಿ ಭಾರತ ಸರ್ಕಾರಕ್ಕೆ ವರದಿ ನೀಡಿರುವಂತೆ CAP-99 ಮತ್ತು Slipped back ಜನವಸತಿಗಳಿಗೆ ಆದ್ಯತೆ ನೀಡಿ ಬಳಸತಕ್ಕದ್ದು.

4. ಪ್ರಗತಿ ವರದಿಯನ್ನು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು-20 ಇವರಿಗೆ ಹಾಗೂ ಸರ್ಕಾರಕ್ಕೆ ಸಲ್ಲಿಸುವುದು ಹಾಗೂ ಸಾಧನೆಯ ವರದಿಯನ್ನು ಭಾರತ ಸರ್ಕಾರದ ವೆಬ್ ಸೈಟ್ ddws.nic.in ಮುಖೇನ ಜಿಲ್ಲಾವಾರು upload ಮಾಡುವುದು.

5. ಜಿಲ್ಲಾ ಪಂಚಾಯತ್‌ಗಳು ಈ ವೆಚ್ಚವನ್ನು ಲೆಕ್ಕಶೀರ್ಷಿಕೆ 4215-ನೀರು ಸರಬರಾಜು ಮತ್ತು ನೈರ್ಮಲ್ಯ ಮೇಲಣ ವೆಚ್ಚ-01-ನೀರು ಸರಬರಾಜು-102-ಗ್ರಾಮೀಣ ನೀರು ಸರಬರಾಜು-9-ಟೆಸ್ಟ್-01-ಟೆಸ್ಟ್ ಗ್ರಾಮೀಣ ನೀರು ಸರಬರಾಜು-132-ಬಂಡವಾಳ ವೆಚ್ಚಗಳು (ಯೋಜನೆ) 2008-09ರಡಿ ಭರಿಸತಕ್ಕದ್ದು. (4215-01-102-9-01-132)

6. ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ:ಗ್ರಾಅಪ/231 /ಪಿಬಿಎಸ್/08 ದಿ:26.5.2008ರಲ್ಲಿನ ಸಹಮತಿಯನ್ವಯ ಹೊರಡಿಸಲಾಗಿದೆ.

ಭಾರತದ ರಾಷ್ಟ್ರಪತಿಗಳ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಡಾ:ಎನ್.ಮಂಜುಳ)
ನಿರ್ದೇಶಕರು (ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಪ್ರತಿಗಳು :

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಚೇರಿ, ಕಾಲೇಜು ರಸ್ತೆ, ಧಾರವಾಡ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು,ವಿಧಾನಸೌಧ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಪ್ರಧಾನ ಕಾರ್ಯದರ್ಶಿಗಳು, ಯೋಜನಾ ಇಲಾಖೆ
8. ವಿಶೇಷಾಧಿಕಾರಿಗಳು (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
10. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ,ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ ಸಂಕೀರ್ಣ,ಅಭಯ ಸಂಕೀರ್ಣ,4ನೇ ಮಹಡಿ,ನಂ.55,ರೆಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-20.
11. ಎಲ್ಲಾ ಜಿಲ್ಲಾಪಂಚಾಯತ್‌ಗಳ ಅಧ್ಯಕ್ಷರು.
12. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ ಮುಖ್ಯ ಲೆಕ್ಕಾಧಿಕಾರಿಗಳು.
13. ರಾಜ್ಯದ ಎಲ್ಲಾ (8) ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತಗಳ ಅಧೀಕ್ಷಕ ಅಭಿಯಂತರುಗಳು.
14. ಎಲ್ಲಾ (38) ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್‌ಗಳು
15. ಮುಖ್ಯ ಲೆಕ್ಕಾಧಿಕಾರಿಗಳು, ಮುಖ್ಯ ಇಂಜಿನಿಯರ್‌ರ ಕಛೇರಿ, ಆನಂದರಾವ್ ವೃತ್ತ ,ಬೆಂಗಳೂರು-10.
16. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು
17. ಉಪನಿರ್ದೇಶಕರು,ನೆಟ್‌ವರ್ಕ್‌ಮ್ಯಾನೇಜ್‌ಮೆಂಟ್ ಸೆಂಟರ್,ನಂ.49,ಖನಿಜ ಭವನ,ರೇಸ್‌ಕೋರ್ಸ್‌ರಸ್ತೆ,ಬೆಂಗಳೂರು.
18. ಎಲ್ಲಾ ಜಿಲ್ಲೆಯ ಜಿಲ್ಲಾ ಖಜಾನಾಧಿಕಾರಿಗಳು.
19. ಸಹ ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ,ಲಲಿತ್ ಮಹಲ್ ರಸ್ತೆ, ಮೈಸೂರು.
20. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) , ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರುಗಳ ಆಪ್ತ ಕಾರ್ಯದರ್ಶಿಗಳು.
21. ಆಯುಕ್ತರು, KRWSSA ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ, ನಿರ್ದೇಶಕರು (ಗ್ರಾಮೂಸೌ) ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ/ನಿರ್ದೇಶಕರು (ಗ್ರಾಮ ಸ್ವರಾಜ್) /ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರುಗಳ ಆಪ್ತ ಸಹಾಯಕರು.
22. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅ ಪಂ.ರಾಜ್ ಇಲಾಖೆ, ಬೆಂಗಳೂರು.
23. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು)
24. ಗ್ರಾ.ಅ.ಪಂ.ರಾಜ್ ಇಲಾಖೆ ಮಾಹಿತಿ ಕೇಂದ್ರ - 10 ಪ್ರತಿಗಳು.
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ)
26. ಶಾಖಾ ರಕ್ಷಾಕಡತ / ಹೆಚ್ಚುವರಿ ಪ್ರತಿಗಳು.